## ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ಬೆಂಗಳೂರು, ಇವರ ನಡವಳಿಗಳು

**ವಿಷಯ:** 2017-18ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಅಭ್ಯರ್ಥಿಗಳಿಗೆ ನರ್ಸಿಂಗ್ ತರಬೇತಿ ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಉಲ್ಲೇಖ:**
1. ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲುಡಿ 205 ಎಂಡಿಎಸ್ 2016, ದಿ: 26.10.2016
2. ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲುಡಿ 169 ಎಂಡಿಎಸ್ 2017, ದಿ: 06.04.2017
3. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲುಡಿ 169 ಎಂಡಿಎಸ್ 2017, ದಿ: 25.04.2017 & 22.08.2017

********

**ಪ್ರಸ್ತಾವನೆ:**

ಅಲ್ಪಸಂಖ್ಯಾತರ ಅಭ್ಯರ್ಥಿಗಳಿಗೆ ನರ್ಸಿಂಗ್ ತರಬೇತಿ ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ ಅನುದಾನ ಬಿಡುಗಡೆ ಮಾಡುವ ಯೋಜನೆಯನ್ನು ಅನುಷ್ಠಾನಗೊಳಿಸಲು ಉಲ್ಲೇಖ (1) ರಲ್ಲಿ ಆದೇಶಿಸಲಾಗಿದೆ. ಸರ್ಕಾರಿ/ಖಾಸಗಿ ಕಾಲೇಜುಗಳಲ್ಲಿ ನರ್ಸಿಂಗ್ ಹಾಗೂ ಪ್ಯಾರಾ ಮೆಡಿಕಲ್ ಕೋರ್ಸಗಳಲ್ಲಿ ಅಧ್ಯಯನ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ ಸಮುದಾಯಕ್ಕೆ ಸೇರಿದ ವಿದ್ಯಾರ್ಥಿಗಳಿಗೆ ಗರಿಷ್ಠ ರೂ 35,000/-ಗಳ ಅನುದಾನವನ್ನು ಪ್ರತಿ ವರ್ಷ (ಕೋರ್ಸ ಮುಗಿರುವ ವರೆಗೆ) ನೀಡಲು ಅನುಷ್ಠಾನಗೊಳಿಸಲು ಆದೇಶಿಸಿದೆ.

ಅದರಂತೆ, ಈಗಾಗಲೇ ಅರ್ಜಿಗಳನ್ನು ಅಹ್ವಾನಿಸಲು ಜಿಲ್ಲೆಗಳಿಗೆ ತಿಳಿಸಲಾಗಿರುತ್ತದೆ. ಅದರಂತೆ, 2017-18ನೇ ಸಾಲಿಗೆ ಮೊದಲನೇ ಹಂತದಲ್ಲಿ 2017-18ನೇ ಸಾಲಿಗೆ, ಉಲ್ಲೇಖ (3) ರ ಸರ್ಕಾರಿ ಆದೇಶದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ ಮೊದಲನೇ, ಎರಡನೇ ಮತ್ತು ಮೂರನೇ ತ್ರೈಮಾಸಿಕ ಕಂತನ್ನು ಬಿಡುಗಡೆಯಾದ ಅನುದಾನದ ಪೈಕಿ ಅದರಲ್ಲಿ ಮಾನ್ಯ ಮುಖ್ಯ ಮಂತ್ರಿಗಳ ಅಭಿವೃದ್ಧಿ ಯೋಜನೆಯಡಿ ರೂ 25000.00 ಲಕ್ಷಗಳನ್ನು ಬಿಡುಗಡೆ ಮಾಡಿ ನಿರ್ದೇಶಕರು, ಅಲ್ಪಸಂಖ್ಯಾತರ ಇಲಾಖೆ, ಬೆಂಗಳೂರು ಇವರ ವಶಕ್ಕೆ ಬಿಡುಗಡೆ ಮಾಡಲಾಗಿದೆ. ಸದರಿ ಅನುದಾನದಲ್ಲಿ ನರ್ಸಿಂಗ್ ತರಬೇತಿಗಾಗಿ ರೂ. 812.70 ಲಕ್ಷಗಳನ್ನು (ರೂ. ಎಂಟು ಕೋಟಿ ಹನ್ನೆರಡು ಲಕ್ಷದ ಎಪ್ಪತ್ತು ಸಾವಿರಗಳು ಮಾತ್ರ) ಗಳನ್ನು ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆರವರಿಗೆ ಬಿಡುಗಡೆ ಮಾಡಲು ಈ ಕೆಳಕಂಡಂತೆ ಆದೇಶ

## ಆ ದೇ ಶ

**ಸಂ: ಅಸಂನಿ:ನರ್ಸಿಂಗ್:ಸಿಆರ್-02 :2017-18** **ದಿನಾಂಕ: 04.01.2018**

ಪ್ರಸ್ತಾವನೆ ವಿವರಗಳಂತೆ, ಮಾನ್ಯ ಮುಖ್ಯ ಮಂತ್ರಿಗಳ ಅಭಿವೃದ್ದಿ ಯೋಜನೆಯಡಿ ಸರ್ಕಾರದಿಂದ ಬಿಡುಗಡೆಯಾದ ರೂ 25000.00 ಲಕ್ಷಗಳಲ್ಲಿ ಅಲ್ಪಸಂಖ್ಯಾತರ ಸಮುದಾಯದ ಯುವಕ/ಯುವತಿಯರಿಗೆ ಅಂದರೆ ಮುಸ್ಲಿಂ, ಬೌದ್ಧರು, ಸಿಖ್ ಮತ್ತು ಪಾರ್ಸಿ ಜನಾಂಗದ ನರ್ಸಿಂಗ್ ವಿದ್ಯಾರ್ಥಿಗಳಿಗೆ ರೂ. 812.70 ಲಕ್ಷಗಳನ್ನು (ರೂ. ಎಂಟು ಕೋಟಿ ಹನ್ನೆರಡು ಲಕ್ಷದ ಎಪ್ಪತ್ತು ಸಾವಿರಗಳು ಮಾತ್ರ) ಗಳನ್ನು ಲಗತ್ತಿಸಿರುವ ಅನುಬಂಧ ಅನ್ವಯ ಆಯಾ ಜಿಲ್ಲೆಗಳ ಮುಂದೆ ನಮೂದಿಸಿರುವ ಅನುದಾನವನ್ನು ಸಂಬಂಧಪಟ್ಟ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆರವರಿಗೆ ಕೆಳಕಂಡ ನಿಬಂಧನೆಗೊಳಪಟ್ಟು ಬಿಡುಗಡೆ ಮಾಡಲಾಗಿದೆ.